**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.**

**ಸಿ.ಸಿ. ಸಂಖ್ಯೆಃ 617/2019**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : **ಎ 1. ಮಂಜೇಗೌಡ ಬಿನ್ ಲೇಟ್ ಕರೀಗೌಡ,**
ಸುಮಾರು **47** ವರ್ಷ ವಯಸ್ಸು,
ವಾಸಃ ಬೂಚಹಳ್ಳಿ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ಎ 2. ಮಂಜುಳ ಕೋಂ ಮಂಜೇಗೌಡ,**
ಸುಮಾರು **36** ವರ್ಷ ವಯಸ್ಸು,
ವಾಸಃ ಬೂಚಹಳ್ಳಿ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ಎ 3. ರವಿ ಬಿ ಎಂ ಬಿನ್ ಮರೀಗೌಡ,**
ಸುಮಾರು 22 ವರ್ಷ ವಯಸ್ಸು,
ವಾಸಃ ಬೂಚಹಳ್ಳಿ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ದೋಷಾರೋಪಣೆ**

ಶ್ರೀಮತಿ ನಮ್ರತಾ ಎಸ್. ಹೊಸಮಠ, ಬಿ.ಎ., ಎಲ್.ಎಲ್.ಬಿ., ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ಸಿಸಿ ಸಂಖ್ಯೆ - 617/2019

1. ದಿನಾಂಕಃ 21.01.2017 ರಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ ಹುಣಸೂರು ತಾಲ್ಲೂಕು, ಬೂಚಹಳ್ಳಿ ಗ್ರಾಮದ ಸಾಕ್ಷಿ-1 ರವರ ಮನೆಯ ಮುಂಭಾಗ 1 ರಿಂದ 3 ನೇ ಆರೋಪಿಗಳು ಹುಲ್ಲು ಹೊತ್ತುಕೊಂಡು ಬರುತ್ತಿದ್ದು ಮನೆಯ ಮುಂದೆ ಇದ್ದ ಸಾಕ್ಷಿ-1, 4, ಮತ್ತು 5 ರವರ ಪೈಕಿ ಸಾಕ್ಷಿ-1 ರವರು 1 ನೇ ಆರೋಪಿಯನ್ನು ನಮ್ಮ ತಾಯಿ ನಿಂಗಮ್ಮ ರವರಿಗೆ ಸೇರಿದ ಜಮೀನನ್ನು ಅಳತೆ ಮಾಡಲು ಯಾಕೆ ತಕರಾರು ಅರ್ಜಿ ಕೊಟ್ಟಿದ್ದೀಯಾ ಎಂದು ಕೇಳಿದಕ್ಕೆ, 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವುಳ್ಳವರಾಗಿ, 1 ನೇ ಆರೋಪಿಯಾದ ನೀವು ಸಾಕ್ಷಿ-1 ರವರಿಗೆ ಬೋಳಿ ಮಗನೆ, ಸೂಳೇ ಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **504 ಸಹವಾಚಕ ಕಲಂ 34** ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವುಳ್ಳವರಾಗಿ, 1 ನೇ ಆರೋಪಿಯಾದ ನೀವು ಸಾಕ್ಷಿ-1 ರವರನ್ನು ರಸ್ತೆಯಲ್ಲೇ ತಡೆದು ಮುಂದೆ ಚಲಿಸದಂತೆ ಅಕ್ರಮ ತಡೆಯನ್ನುಂಟು ಮಾಡಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **341 ಸಹವಾಚಕ ಕಲಂ 34** ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಮೂರನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವುಳ್ಳವರಾಗಿ, ಸಾಕ್ಷಿ-4 ಮತ್ತು ಸಾಕ್ಷಿ-5 ರವರು ಕುಡುಗೋಲನ್ನು ಕಿತ್ತುಕೊಳ್ಳಲು ಹೋದಾಗ 1 ನೇ ಆರೋಪಿಯಾದ ನೀವು ಸಾಕ್ಷಿ-5 ರವರಿಗೆ ಕುಡುಗೋಲಿನಿಂದ ಎಡಕೈನ ಕಿರುಬೆರಳಿಗೆ ಹೊಡೆದು ರಕ್ತಗಾಯ ಮಾಡಿದ್ದು ಹಾಗೂ 3 ನೇ ಆರೋಪಿಯಾದ ನೀವು ಕಲ್ಲಿನಿಂದ ಸಾಕ್ಷಿ-1 ರವರ ಎಡಕಾಲಿನ ಹೆಬ್ಬೆರಳಿಗೆ ಹೊಡೆದು ಗಾಯವನ್ನುಂಟು ಮಾಡಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **324 ಸಹವಾಚಕ ಕಲಂ 34** ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

4. ನಾಲ್ಕನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವುಳ್ಳವರಾಗಿ, 2ನೇ ಆರೋಪಿಯಾದ ನೀವು ಸಾಕ್ಷಿ-5ರವರಿಗೆ ಕೈಯಿಂದ ಎದೆಯ ಬಲಭಾಗಕ್ಕೆ ಹೋಡೆದು ನೋವುಂಟು ಮಾಡಿದ್ದು, 1ನೇ ಆರೋಪಿಯಾದ ನೀವು ಸಾಕ್ಷಿ-4ರವರಿಗೆ ಕಾಲಿನಿಂದ ಹೊಟ್ಟೆಗೆ ಒದ್ದು ಸಾಮಾನ್ಯ ಸ್ವರೂಪ ನೋವುಂಟು ಮಾಡಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **323 ಸಹವಾಚಕ ಕಲಂ 34** ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

5. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವುಳ್ಳವರಾಗಿ, 1 ರಿಂದ 3ನೇ ಆರೋಪಿಗಳಾದ ನೀವು ಸಾಕ್ಷಿ-1, 4 ಮತ್ತು 5ರವರಿಗೆ ನಿಮ್ಮಗಳನ್ನು ಕೊಲೆ ಮಾಡುತ್ತೇನೆಂದು ಕೊಲೆ ಬೆದರಿಕೆ ಹಾಕಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **506 ಸಹವಾಚಕ ಕಲಂ 34 ರ** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ನಮ್ರತಾ ಎಸ್. ಹೊಸಮಠ)**

ದಿನಾಂಕಃ **20.08.2025** ಅಪರ ಸಿವಿಲ್ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.